For more job news visit : www.kpscvaani.com

ಮೈಸೂರು ಮಹಾನಗರ ಪಾಲಿಕೆ, ಮೈಸೂರು

ನಂ. ಸಿಇಎಸ್‌ಟಿ (4) : ಸಿಆರ್ : 05 : 2024-25

ಆಯುಕ್ತರ ಕಾರ್ಯಾಲಯ,
ಆಡಳಿತ ವಿಭಾಗ,
ದಿನಾಂಕ : 13-06-2024

ಅಧಿಸೂಚನೆ

ಕರ್ನಾಟಕ ಮಹಾನಗರ ಪಾಲಿಕೆಗಳು (ಅಧಿಕಾರಿಗಳು ಮತ್ತು ಸಿಬ್ಬಂದಿಗಳ ಸಾಮಾನ್ಯ ನೇಮಕಾತಿ) ನಿಯಮಗಳು, 2011 ರಂತೆ ಮೈಸೂರು ಮಹಾನಗರ ಪಾಲಿಕೆಗೆ ಮಂಜೂರಾಗಿರುವ **"ಪೌರಕಾರ್ಮಿಕರ ಹುದ್ದೆ"** ಗಳ ಪೈಕಿ ನೇರ ನೇಮಕಾತಿಯಡಿ ಖಾಲಿ ಇರುವ **"ಪೌರಕಾರ್ಮಿಕರ"** ಹುದ್ದೆಗಳಿಗೆ ಕರ್ನಾಟಕ ಮುನಿಸಿಪಲ್ ಕಾರ್ಪೊರೇಷನ್ (ರಾಜ್ಯದ ಪಾಲಿಕೆಗಳ ಪೌರಕಾರ್ಮಿಕರ ನೇಮಕಾತಿ) (ವಿಶೇಷ) ನಿಯಮಗಳು 2022 ರ ರೀತ್ಯಾ ಹಾಗೂ ಸರ್ಕಾರದ ಆದೇಶ ಸಂಖ್ಯೆ: ನಅಇ 171 ಎಂಎನ್‌ಇ 2022 (ಇ), ದಿನಾಂಕ: 09-03-2023 ರಂತೆ ರಾಜ್ಯದ ಮಹಾನಗರಪಾಲಿಕೆಗಳಿಗೆ (ಬಿಬಿಎಂಪಿ ಹೊರತುಪಡಿಸಿ) ಸಂಖ್ಯಾತಿರಿಕ್ತ (Supernumerary Posts) ಹುದ್ದೆಗಳನ್ನು ಹೊಸದಾಗಿ ಸೃಜಿಸಿ ಆದೇಶ ಹೊರಡಿಸಲಾಗಿರುತ್ತದೆ. ಮುಂದುವರೆದು, ಸರ್ಕಾರದ ಆದೇಶ ಸಂಖ್ಯೆ: ನಅಇ 171 ಎಂಎನ್‌ಇ 2022 (ಇ), ದಿನಾಂಕ: 27-10-2023 ರಂದು ಹೊರಡಿಸಿರುವ ಸೇರ್ಪಡೆ ಆದೇಶವನ್ನು ದಿನಾಂಕ : 02-11-2023 ರಂದು ಹೊರಡಿಸಿರುವ ತಿದ್ದುಪಡಿ ಆದೇಶದಲ್ಲಿ ಮೈಸೂರು ಮಹಾನಗರಪಾಲಿಕೆಗೆ 252 ಪೌರಕಾರ್ಮಿಕರ ಸಂಖ್ಯಾತಿರಿಕ್ತ (Supernumerary Posts) ಹುದ್ದೆಗಳನ್ನು ಹಂಚಿಕೆ ಮಾಡಲಾಗಿದ್ದು, ಅದರಂತೆ ಸದರಿ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ನಿಗಧಿತ ನಮೂನೆಯಲ್ಲಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ವಿವರ	ದಿನಾಂಕ	ಅರ್ಜಿ ನಮೂನೆ ಪಡೆಯುವ ವಿಳಾಸ
ಅರ್ಜಿ ಸಲ್ಲಿಸಲು ನಿಗಧಿಪಡಿಸಿರುವ ಪ್ರಾರಂಭಿಕ ದಿನಾಂಕ	18-06-2024	ಮೈಸೂರು ಮಹಾನಗರ ಪಾಲಿಕೆ ಕೇಂದ್ರ ಕಚೇರಿ, ಸಯ್ಯಾಜಿರಾವ್ ರಸ್ತೆ, ಮೈಸೂರು-570004
ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ	18-07-2024	

ನಗರ ಸ್ಥಳೀಯ ಸಂಸ್ಥೆಯ ಹೆಸರು	ಹುದ್ದೆಯ ಹೆಸರು ಹಾಗೂ ವೇತನ ಶ್ರೇಣಿ	ಭರ್ತಿ ಮಾಡಲು ಒಟ್ಟು ಖಾಲಿ ಇರುವ ಹುದ್ದೆಗಳ ಸಂಖ್ಯೆ	ನಿಗಧಿಪಡಿಸಲಾದ ಕನಿಷ್ಠ ವಿದ್ಯಾರ್ಹತೆ/ ಅರ್ಹತೆಗಳು
ಮೈಸೂರು ಮಹಾನಗರ ಪಾಲಿಕೆ	ಪೌರಕಾರ್ಮಿಕ (ರೂ.17000-28950)	252	• ವಿದ್ಯಾರ್ಹತೆ ಅನ್ವಯಿಸುವುದಿಲ್ಲ. • ಕನ್ನಡ ಮಾತನಾಡಲು ಬಲ್ಲವರಾಗಿರಬೇಕು. • ಮೈಸೂರು ಮಹಾನಗರ ಪಾಲಿಕೆಯಲ್ಲಿ ಹಾಲಿ ನೇರಪಾವತಿ/ ದಿನಗೂಲಿ / ಕ್ಷೇಮಾಭಿವೃದ್ಧಿ ಅಧಿನಿಯಮ/ ಸಮಾನ ಕೆಲಸಕ್ಕೆ ಸಮಾನ ವೇತನದಡಿ ಪೌರಕಾರ್ಮಿಕ ಹುದ್ದೆಯಲ್ಲಿ ಕನಿಷ್ಠ ಎರಡು (2) ವರ್ಷಗಳಿಗಿಂತ ಕಡಿಮೆ ಇಲ್ಲದಂತೆ ನಿರಂತರವಾಗಿ ಕೆಲಸ ನಿರ್ವಹಿಸುತ್ತಿರುವ ಹಾಗೂ ಈ ನಿಯಮಗಳು ಜಾರಿಗೆ ಬಂದ ದಿನಾಂಕದಲ್ಲಿಯೂ ಕಾರ್ಯನಿರ್ವಹಿಸುತ್ತಿರುವ ಪೌರಕಾರ್ಮಿಕರು ಮಾತ್ರ ಅರ್ಹರಿರುತ್ತಾರೆ. • ಅರ್ಜಿ ಸಲ್ಲಿಸಲು ಸರ್ಕಾರ ಅಧಿಸೂಚನೆ ಹೊರಡಿಸಿದ ದಿನಾಂಕಕ್ಕೆ 18 ವರ್ಷ ಪೂರ್ಣಗೊಂಡಿದ್ದು, ಗರಿಷ್ಠ ವಯೋಮಿತಿ 55 ವರ್ಷ.

..2

For more job news visit : www.kpscvaani.com

ಮೈಸೂರು ಮಹಾನಗರ ಪಾಲಿಕೆಯಲ್ಲಿ ನೇರ ನೇಮಕಾತಿಯಡಿ ಖಾಲಿ ಇರುವ ಪೌರಕಾರ್ಮಿಕರ ಹುದ್ದೆಗಳನ್ನು ಸರ್ಕಾರದ ಸಿಬ್ಬಂದಿ ಮತ್ತು ಆಡಳಿತ ಇಲಾಖೆಯು ಹೊರಡಿಸಿರುವ ಆದೇಶ ಸಂಖ್ಯೆ ಸಿಆಸುಇ : 01 : ಸೆಹಿಮ : 2022, ಬೆಂಗಳೂರು, ದಿನಾಂಕ : 28-12-2022 ರಂತೆ ರೋಸ್ಟರ್ ಬಿಂದುಗಳನ್ನು ವರ್ಗೀಕರಿಸಿಸುವ ವಿವರ ಈ ಕೆಳಕಂಡಂತಿದೆ.

ಮೀಸಲಾತಿ	ಇತರೆ	ಮಹಿಳೆ	ಗ್ರಾಮೀಣ	ಮಾ.ಸ್ಯೆ.	ಯೋ.ನಿ.	ಕ.ಮಾ.ಅ.	ಅಂ.ವಿ.	ಶ್ರ.ಲಿಂ.	ಒಟ್ಟು
ಪ.ಜಾ.	07	14	11	04	02	02	02	01	43
ಪ.ಪಂ.	02	07	05	01	01	01	01	–	18
ಪ್ರ.-1	02	03	03	01	–	–	01	–	10
ಪ್ರ-2(ಎ)	05	13	10	03	02	02	02	01	38
ಪ್ರ-2(ಬಿ)	03	03	03	01	–	–	01	–	11
ಪ್ರ-3(ಎ)	02	03	03	01	–	–	01	–	10
ಪ್ರ-3(ಬಿ)	01	05	03	01	–	–	01	–	11
ಸಾ.ಅ.	18	37	28	11	05	05	06	01	111
ಒಟ್ಟು	**40**	**85**	**66**	**23**	**10**	**10**	**15**	**03**	252

ಅರ್ಜಿ ಸಲ್ಲಿಸುವ ವಿಧಾನ :-

ಅಧಿಸೂಚನೆಯ ಪ್ರತಿಯನ್ನು ಹಾಗೂ ನಿಗಧಿತ ಅರ್ಜಿ ನಮೂನೆಯನ್ನು ಮೈಸೂರು ಮಹಾನಗರ ಪಾಲಿಕೆಯ ಕೇಂದ್ರ ಕಚೇರಿಯಿಂದ ಪಡೆದು, ತಮಗೆ ಅನ್ವಯಿಸುವ ಎಲ್ಲಾ ಅಂಕಣಗಳನ್ನು ಭರ್ತಿ ಮಾಡುವುದು. ಅಭ್ಯರ್ಥಿಯು ತನ್ನ ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರವನ್ನು ಅರ್ಜಿಯ ಮೇಲೆ ಅಂಟಿಸಿ, ಅದರ ಮೇಲೆ ಸಹಿ ಅಥವಾ ಎಡಗೈ ಹೆಬ್ಬೆಟ್ಟಿನ ಗುರುತು ಮಾಡುವುದು ಹಾಗೂ ಅರ್ಜಿಯ ನಮೂನೆಯ ಕೊನೆಯಲ್ಲಿ ಘೋಷಣೆಯ ನಂತರ ಸಹಿ/ಹೆಬ್ಬೆಟ್ಟಿನ ಗುರುತು ಮಾಡುವುದು. ಹುದ್ದೆಗೆ ಸಂಬಂಧಿಸಿದ ವಿದ್ಯಾರ್ಹತೆ, ವಯಸ್ಸು ಮತ್ತು ಕೋರಿರುವ ಮೀಸಲಾತಿಗೆ ಸಂಬಂಧಿಸಿದಂತೆ ಪ್ರಮಾಣ ಪತ್ರಗಳನ್ನು ಸಕ್ಷಮ ಪ್ರಾಧಿಕಾರಿಗಳಿಂದ ಪಡೆದು, ಅವುಗಳ ನಕಲು ಪ್ರತಿಗಳನ್ನು ಸಂಬಂಧಪಟ್ಟ ಶಾಖಾ ಮುಖ್ಯಸ್ಥರಿಂದ ಧೃಡೀಕರಿಸಿ ಅರ್ಜಿಯೊಂದಿಗೆ ಲಗತ್ತಿಸಿ ಅರ್ಜಿಯನ್ನು ಅಧ್ಯಕ್ಷರು, ಆಯ್ಕೆ ಮತ್ತು ನೇರ ನೇಮಕಾತಿ ಪ್ರಾಧಿಕಾರ ಹಾಗೂ ಆಯುಕ್ತರು ಮೈಸೂರು ಮಹಾನಗರ ಪಾಲಿಕೆ ಮೈಸೂರು ಇವರಿಗೆ ದಿನಾಂಕ : 18-07-2024 ರ ಸಂಜೆ 5-30 ಗಂಟೆಯೊಳಗೆ ನೇರವಾಗಿ ಸಲ್ಲಿಸಿ ಸ್ವೀಕೃತಿ ಪಡೆಯತಕ್ಕದ್ದು. ಅಂಚೆ ಮೂಲಕ ಅಥವಾ ಪ್ರತ್ಯೇಕವಾಗಿ ಸಲ್ಲಿಸಲು ಅವಕಾಶವಿರುವುದಿಲ್ಲ. ಅವಧಿ/ಸಮಯ ಮೀರಿ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

ಸೂಚನೆ : ನೇಮಕಾತಿಗೆ ಸಂಬಂಧಿಸಿದಂತೆ ಹೆಚ್ಚಿನ ಮಾಹಿತಿಯನ್ನು ಪಾಲಿಕೆ ವೆಬ್‌ಸೈಟ್ http://www.mysurucity.mrc.gov.in ಅಥವಾ ಮೈಸೂರು ಮಹಾನಗರ ಪಾಲಿಕೆ ಕೇಂದ್ರ ಕಚೇರಿಯಿಂದ ಪಡೆಯಬಹುದಾಗಿದೆ.

ಅಧ್ಯಕ್ಷರು
ಆಯ್ಕೆ ಮತ್ತು ನೇರ ನೇಮಕಾತಿ ಪ್ರಾಧಿಕಾರ ಹಾಗೂ ಆಯುಕ್ತರು
ಮೈಸೂರು ಮಹಾನಗರ ಪಾಲಿಕೆ
ಮೈಸೂರು

ಸ್ಥಳ : ಮೈಸೂರು

ದಿನಾಂಕ :13-06-2024